



ಅರುಣ ಪಿ. ಭಟ್ಟ

# ವಾರಭವಿಷ್ಯ: 09.06.2022ರಿಂದ 15.06.2022ರವರೆಗೆ




ವೃತ್ತಿನಿರತರಿಗೆ ಉತ್ತಮವಾದ ದಿನಗಳಿವು. ಉದ್ಯೋಗ ಸ್ಥಳದಲ್ಲಿ ನಿಮ್ಮ ಪಾಲಿನ ಜವಾಬ್ದಾರಿ ಜಾಸ್ತಿ ಆಗಲಿದೆ. ಆದಾಯದಲ್ಲಿ ಹೆಚ್ಚಳ ಆಗುವ ಸಾಧ್ಯತೆಗಳಿವೆ. ಸೇವಾ ವಲಯ ಹಾಗೂ ಉದ್ಯಮ, ವ್ಯಾಪಾರ ಮಾಡುವವರಿಗೆ ಲಾಭದ ಪ್ರಮಾಣ ಹೆಚ್ಚಾಗಲಿದೆ. ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ತೆಗೆದುಕೊಳ್ಳಿ. ವಿರೋಧಿಗಳು ನಿಮಗೆ ಸಮಸ್ಯೆ ಮಾಡಲು ಪ್ರಯತ್ನಿಸಬಹುದು. ಶುಭದಿನ 10. ಕನಕಧಾರಾ ಸ್ತೋತ್ರ ಪಠಿಸಿರಿ.

---

ಪ್ರೀತಿಪಾತ್ರರೊಂದಿಗೆ ಉತ್ತಮ ಸಮಯವನ್ನು ಕಳೆಯಲಿದ್ದೀರಿ. ಸೋದರ ಸೋದರಿಯರ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಧಾರ್ಮಿಕ ಕಾರ್ಯಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಹೆಸರಾಂತ ಸಂಸ್ಥೆಯೊಂದರಲ್ಲಿ ಉದ್ಯೋಗ ದೊರೆಯುವ ಅವಕಾಶ ಇದೆ. ಹೊಸ ವಸ್ತುಗಳನ್ನು ಖರೀದಿ ಮಾಡಲಿದ್ದೀರಿ. ನಿಮ್ಮ ಕೆಲಸ ಸಾಧನೆಯಿಂದ ಪೋಷಕರು ಸಂತೋಷಪಡುತ್ತಾರೆ. ಶುಭದಿನ 12. ಹನುಮಾನ್ ಚಾಲೀಸ್ ಪಠಿಸಿರಿ.




---




ವಿರೋಧಿಗಳಿಗೆ ತಕ್ಕ ಪ್ರತ್ಯುತ್ತರ ನೀಡಲಿದ್ದಿರಿ. ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ಕುಟುಂಬದಲ್ಲಿ ಭಿನ್ನಾಭಿಪ್ರಾಯ ತಲೆದೋರುವ ಸಾಧ್ಯತೆ ಇದೆ. ಮನೆಯಲ್ಲಿ ಕಾರ್ಯಕ್ರಮ ಆಯೋಜಿಸುವ ಸಾಧ್ಯತೆ ಇದೆ. ಬಹಳ ಜವಾಬ್ದಾರಿಯುತ ಕೆಲಸವೊಂದಕ್ಕೆ ನಿಮ್ಮನ್ನು ನೇಮಿಸುವ ಸಾಧ್ಯತೆಗಳಿವೆ. ಉದ್ಯೋಗ ಸ್ಥಳದಲ್ಲಿ ಅನುಕೂಲಕರವಾದ ವಾತಾವರಣ ಇರಲಿದೆ. ಶುಭದಿನ 11. ವಿಷ್ಣು ಸಹಸ್ರನಾಮ ಪಠಿಸಿರಿ.

---

ಸಂಗಾತಿ ಜತೆಗೆ ಬಾಂಧವ್ಯ ಇನ್ನಷ್ಟು ಗಟ್ಟಿ ಆಗಲಿದೆ. ಅವಿವಾಹಿತರಿಗೆ ಸೂಕ್ತ ಸಂಬಂಧ ದೊರೆಯುವ ಸಾಧ್ಯತೆ ಇದೆ. ವಿರೋಧಿಗಳು ನಿಮಗೆ ಸಮಸ್ಯೆ ಮಾಡುವ ಸಾಧ್ಯತೆ ಇದೆ. ದೂರ ಪ್ರಯಾಣ ಮಾಡುವುದಿದ್ದರೆ ಮುಂದಕ್ಕೆ ಹಾಕುವುದು ಒಳಿತು. ವೃತ್ತಿಯಲ್ಲಿ ಕೆಲವು ಸವಾಲುಗಳನ್ನು ಎದುರಿಸಬೇಕಾಗುತ್ತದೆ. ಪ್ರೇಮಿಗಳಲ್ಲಿ ಸಣ್ಣ ಪುಟ್ಟ ಭಿನ್ನಾಭಿಪ್ರಾಯಗಳು ಎದುರಾಗಬಹುದು. ಶುಭದಿನ 15. ಚಂಡಿ ಪಾರಾಯಣ ಮಾಡಿರಿ.




---




ತಾಯಿ ಕಡೆಯ ಸಂಬಂಧಿಕರಿಂದ ಪ್ರೀತಿ ವಾತ್ಸಲ್ಯ ದೊರೆಯುತ್ತದೆ. ವಿದೇಶ ವ್ಯವಹಾರದಲ್ಲಿ ಏಳ್ಗೆ ಇದೆ. ಇದೇ ವೇಳೆ ಆತಂಕ, ಆರೋಗ್ಯ ಸಮಸ್ಯೆಗಳು ಕಾಡಬಹುದು. ವಿರೋಧಿಗಳಿಂದ ಕಾನೂನು ವ್ಯಾಜ್ಯಗಳು ಎದುರಾಗಬಹುದು. ಈ ವಾರದಲ್ಲಿ ನಿಮ್ಮ ವರ್ಚಸ್ಸು ಬದಲಾಗಲಿದೆ. ಪ್ರಭಾವಿಗಳಾಗಿ ಹೊರಹೊಮ್ಮಲಿದ್ದೀರಿ. ಧಾರ್ಮಿಕ ಆಚರಣೆಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಶುಭದಿನ 12. ಶ್ರೀವೇಂಕಟೇಶ್ವರ ಸ್ತೋತ್ರ ಪಠಿಸಿರಿ.

---

ಶೈಕ್ಷಣಿಕ, ತಂತ್ರಜ್ಞಾನ, ಸಾಹಿತ್ಯ ಕ್ಷೇತ್ರದಲ್ಲಿ ಇರುವವರ ಕೌಶಲ್ಯ ಹೆಚ್ಚಾಗಲಿದೆ. ಮಕ್ಕಳಿಗೆ ಸಂಬಂಧಿಸಿದಂತೆ ಶುಭ ಸುದ್ದಿ ಕೇಳಲಿದ್ದೀರಿ. ಆರ್ಥಿಕವಾಗಿ ನಿಮ್ಮ ಸ್ಥಿತಿ ಉತ್ತಮವಾಗಿರುತ್ತದೆ. ಹಲವು ಕ್ಷೇತ್ರದಲ್ಲಿ ಅನುಕೂಲಕರವಾದ ವಾತಾವರಣ ಇರಲಿದೆ. ಆದರೆ ಕಾನೂನು ವ್ಯಾಜ್ಯಗಳಲ್ಲಿ ಬಹಳ ಎಚ್ಚರಿಕೆಯಿಂದ ಹೆಜ್ಜೆಗಳನ್ನು ಇಡಬೇಕು. ಶುಭದಿನ 09. ಕಾಲಭೈರವನ ಸೇವೆ ಮಾಡಿರಿ.




---




ಕುಟುಂಬದಲ್ಲಿ ಸಂತಸದ ವಾತಾವರಣ ಇರಲಿದೆ. ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ಅವುಗಳು ನಿವಾರಣೆ ಆಗುತ್ತವೆ. ಆಸ್ತಿ ವ್ಯವಹಾರಗಳಲ್ಲಿ ಪ್ರಗತಿ ಇದೆ. ವ್ಯಾಪಾರ ವ್ಯವಹಾರಗಳಲ್ಲೂ ಪ್ರಗತಿ ಇದೆ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಸುಮಧುರ ಕ್ಷಣಗಳನ್ನು ಕಳೆಯುವ ಯೋಗ ಇದೆ. ಈ ಹಿಂದಿಗಿಂತ ಆರ್ಥಿಕ ಪರಿಸ್ಥಿತಿ ಉತ್ತಮವಾಗಿರುತ್ತದೆ. ವಿವಿಧ ಕ್ಷೇತ್ರಗಳಲ್ಲಿ ನಿರೀಕ್ಷಿತ ಫಲಿತಾಂಶ ಸಿಗಲಿದೆ. ಶುಭದಿನ 13. ಲಿಂಗಾಷ್ಟಕ ಪಠಿಸಿರಿ.

---

ಸೋದರ ಸೋದರಿಯರ ಜತೆಗೆ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ಅದೃಷ್ಟ ನಿಮ್ಮ ಕೈ ಹಿಡಿಯಲಿದೆ. ದಾನ ಧರ್ಮದಲ್ಲಿ ಪಾಲ್ಗೊಳ್ಳಲಿದ್ದೀರಿ. ಕೌಟುಂಬಿಕ ಜೀವನದಲ್ಲಿ ಸಂತೋಷ ಇರಲಿದೆ. ಪೋಷಕರ ಜತೆಗೆ ಸಂತೋಷದ ಸಮಯ ಕಳೆಯಲಿದ್ದೀರಿ. ಮನೆ ಖರೀದಿಗೆ ಪ್ರಶಸ್ತವಾದ ಸಮಯ ಇದು. ಬೌದ್ಧಿಕ ಸಾಮರ್ಥ್ಯ ವೃದ್ಧಿ. ವಿರೋಧಿಗಳು ಕಿರಿಕಿರಿ ಉಂಟು ಮಾಡಲಿದ್ದಾರೆ. ಶುಭದಿನ 12. ಶ್ರೀರಾಮರಕ್ಷಾ ಸ್ತೋತ್ರ ಓದಿರಿ.




---




ವೈಯಕ್ತಿಕ ಜೀವನದಲ್ಲಿ ಸಂಭ್ರಮದ ವಾತಾವರಣ ಇರಲಿದೆ. ಕುಟುಂಬದಲ್ಲಿ ಒಗ್ಗಟ್ಟು ಹೆಚ್ಚಾಗಲಿದೆ. ಆಸ್ತಿ ವಿಚಾರದಲ್ಲಿ ಶುಭ ಸುದ್ದಿ ಕೇಳುವ ಯೋಗ ಇದೆ. ವಿದೇಶಿ ವ್ಯವಹಾರ ಹೂಡಿಕೆಯಲ್ಲಿ ಲಾಭ ಪಡೆಯಲಿದ್ದೀರಿ. ವಿರೋಧಿಗಳು ನಾನಾ ಬಗೆಯಲ್ಲಿ ಹಿಂಸೆ ನೀಡುವ ಸಾಧ್ಯತೆ ಇದೆ. ಆರೋಗ್ಯ ವಿಚಾರದಲ್ಲಿ ಎಚ್ಚರಿಕೆಯಿಂದ ಇರಬೇಕು. ವಾಹನ ಮನೆ ವಿಚಾರದಲ್ಲಿ ಪ್ರಗತಿ ಇದೆ. ಶುಭದಿನ 09. ನವದುರ್ಗಾ ಆರಾಧನೆ ಮಾಡಿರಿ.

---

ಆರೋಗ್ಯದಲ್ಲಿ ಸಮಸ್ಯೆಗಳಿದ್ದಲ್ಲಿ ಚೇತರಿಕೆ ಕಾಣಿಸಿಕೊಳ್ಳುತ್ತದೆ. ಸ್ಥಿರಾಸ್ತಿಯಲ್ಲಿ ಲಾಭ ಗಳಿಸುವ ಯೋಗ ಇದೆ. ವಿದೇಶಿ ವ್ಯವಹಾರ ಹಾಗೂ ಹೂಡಿಕೆಯಲ್ಲಿ ಸ್ಥಿರವಾದ ಪ್ರಗತಿ ಇದೆ. ವಿರೋಧಿಗಳು ನಿಮ್ಮನ್ನು ಕಾನೂನು ಸಮಸ್ಯೆಗಳಲ್ಲಿ ಸಿಲುಕಿಸಬಹುದು. ಉದ್ಯೋಗದಲ್ಲಿ ಮೇಲುಗೈ ಸಾಧಿಸಲಿದ್ದೀರಿ. ಹಲವು ವಿಧದಲ್ಲಿ ನಿರೀಕ್ಷೆಗಿಂತ ಉತ್ತಮವಾದ ಫಲಿತಾಂಶ ದೊರೆಯಲಿದೆ. ಶುಭದಿನ 10. ಶಿವಕವಚ ಪಠಣ ಮಾಡಿರಿ.




---




ಹಣಕಾಸು ಹೂಡಿಕೆಗೆ ಹಲವು ಅವಕಾಶಗಳು ದೊರೆಯಲಿವೆ. ಸಾಲ ಮರುಪಾವತಿಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೀರಿ. ಕೆಲವು ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ನಿಮ್ಮನ್ನು ಕಾಡಬಹುದು. ನಿಮ್ಮ ಸಂಗಾತಿ ನಿರ್ಲಕ್ಷ್ಯ ಮಾಡುತ್ತಿದ್ದಾರೇನೋ ಎಂಬ ಭಾವನೆ ಮೂಡಲಿದೆ. ಆದ್ದರಿಂದ ಇಂಥ ವಿಚಾರಗಳನ್ನು ಬಹಳ ಎಚ್ಚರಿಕೆಯಿಂದ ನಿರ್ವಹಿಸಿ. ಭದಿನ 11. ಲಲಿತಾ ಸಹಸ್ರನಾಮ ಪಠಿಸಿರಿ.

---

ನಿಮ್ಮ ಆರ್ಥಿಕ ಸ್ಥಿತಿ ಉತ್ತಮವಾಗಲಿದೆ. ಶೈಕ್ಷಣಿಕ, ಬೌದ್ಧಿಕ ವಿಷಯಗಳಲ್ಲಿ ಪ್ರಗತಿ ಕಾಣಲಿದ್ದೀರಿ. ಸ್ನೇಹಿತರು, ಸಂಬಂಧಿಕರಿಂದ ಮಹತ್ವದ ಮಾಹಿತಿ ದೊರೆಯಲಿದೆ. ರುಚಿಕಟ್ಟಾದ ಆಹಾರ ಸವಿಯುವ ಯೋಗ ಇದೆ. ಮಕ್ಕಳ ವಿಚಾರದಲ್ಲಿ ಶುಭ ಸುದ್ದಿ ಕೇಳುವಂಥ ಯೋಗ ಇದೆ. ಹೊಸ ಸ್ಥಳಗಳಿಗೆ ಕೆಲ ಕಾಲ ತೆರಳಿ, ತಂಗಬೇಕಾದ ಸನ್ನಿವೇಶ ನಿರ್ಮಾಣ ಆಗಲಿದೆ. ಶುಭದಿನ 14. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.

